**All India Radio: Bangalore**
**Regional Bulletin In Kannada**
**27.03.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.03.2026 / 2.30 p.m.**
**<><><><>**

ಮುಖ್ಯಾಂಶಗಳು

1. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ೫ ಪಾಲಿಕೆಗಳ ಬಜೆಟ್ ಮಂಡನೆ - ರಸ್ತೆ, ಕೆರೆ, ಒಳಚರಂಡಿ ವ್ಯವಸ್ಥೆ ಸುಧಾರಣೆಗೆ ಒತ್ತು
2. ಬೆಂಗಳೂರಿನ ಪಾಲಿಕೆಗಳಿಗೆ ೪೮ ಸಾವಿರ ಕೋಟಿ ರೂಪಾಯಿ ಸಾಲ - ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ
3. ನಾಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್-೨೦೨೬ರ ಉದ್ಘಾಟನಾ ಪಂದ್ಯ - ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೆಎಸ್‌ಸಿಎ ಆಹ್ವಾನ
4. ರಾಜ್ಯದೆಲ್ಲೆಡೆ ರಾಮನವಮಿ ಸಂಭ್ರಮ ; ಶ್ರೀರಾಮ, ಹನುಮ ದೇವಾಲಯಗಳಲ್ಲಿ ವಿಶೇಷ ಪೂಜೆ

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮೊದಲ ಬಜೆಟ್ ಇಂದು ಮಂಡಿಸಲಾಗುತ್ತಿದೆ. ಗ್ರೇಟರ್ ಬೆಂಗಳೂರು ರಚನೆಯಾದ ಬಳಿಕ ಮಂಡಿಸುತ್ತಿರುವ ಮೊದಲ ಬಜೆಟ್ ಇದಾಗಿದೆ. ಐದೂ ಪಾಲಿಕೆಗಳಲ್ಲಿ ಪ್ರತ್ಯೇಕವಾಗಿ ಬಜೆಟ್ ಮಂಡಿಸಲಾಗುತ್ತಿದ್ದು, ಮೊದಲಿಗೆ ಪೂರ್ವನಗರ ಪಾಲಿಕೆ ಆಯುಕ್ತ ಡಿ.ಎಸ್.ರಮೇಶ್ ಚೊಚ್ಚಲ ಆಯವ್ಯಯ ಮಂಡಿಸಿದರು. ರಸ್ತೆ, ಕೆರೆ, ಒಳಚರಂಡಿ ವ್ಯವಸ್ಥೆ ಸುಧಾರಣೆಗೆ ಆಯವ್ಯಯದಲ್ಲಿ ಒತ್ತು ನೀಡಲಾಗಿದೆ. ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಕೆ.ಆರ್.ಪುರಂವರೆಗೆ ಹೊರವಲಯ ರಸ್ತೆಯನ್ನು ದೀರ್ಘಕಾಲಿಕವಾಗಿ ಅಭಿವೃದ್ಧಿಪಡಿಸಲು ಸರ್ಕಾರದ ವತಿಯಿಂದ ೪೫೦ ಕೋಟಿ ರೂಪಾಯಿ ಯೋಜನೆ ರೂಪಿಸಲಾಗಿದ್ದು, ೨೦೨೬-೨೭ರಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು. ಪೂರ್ವನಗರ ಪಾಲಿಕೆಯ ಆದಾಯವು ಆರಂಭಿಕ ಶಿಲ್ಕು ಸೇರಿ ಒಟ್ಟು ೩ ಸಾವಿರದ ೮೯೦ ಕೋಟಿಗಳಷ್ಟು ಇದೆ ಎಂದು ಹೇಳಿದರು. ಕೆರೆಗಳ ಪುನರುಜ್ಜೀವನ ವಿಕೇಂದ್ರಿಕೃತ ಒಳಚರಂಡಿ ವ್ಯವಸ್ಥೆ ಸೇರಿದಂತೆ ಹಲವು ಯೋಜನೆಗಳಿಗೆ ೩ ಕೋಟಿ ೫ ಲಕ್ಷ ಮೀಸಲಿಡಲಾಗಿದೆ. ಬೆಂಗಳೂರು ಕೇಂದ್ರ ಪಾಲಿಕೆಯ ಆಯವ್ಯಯವನ್ನು ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ಮಂಡಿಸಿದರು. ಕೇಂದ್ರ ಪಾಲಿಕೆಯು ೩ ಸಾವಿರದ ೪೨೭ ಕೋಟಿ ಬಜೆಟ್ ಗಾತ್ರ ಹೊಂದಿದ್ದು, ಈ ಬಾರಿ ಪಾಲಿಕೆಯನ್ನು ಗುಂಡಿಮುಕ್ತ ಮಾಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರಿನ ಐದು ನಗರಗಳ ಪಾಲಿಕೆಗಳಿಗೆ ೪೮ ಸಾವಿರ ಕೋಟಿ ರೂಪಾಯಿ ಸಾಲ ಮಾಡಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರನ್ನು ಕಸದ ಬೆಂಗಳೂರು ಹಾಗೂ ಗುಂಡಿಯುಕ್ತ ಬೆಂಗಳೂರು ಮಾಡಲಾಗಿದೆ ಎಂದು ದೂರಿದ್ದಾರೆ. ರಾಜಧಾನಿಯಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ, ಬಿಬಿಎಂಪಿ ಶಾಲಾ ಮಕ್ಕಳಿಗೆ ಶೂ ನೀಡಿಲ್ಲ ಎಂದು ದೂರಿದ್ದಾರೆ. ಇದೇ ವೇಳೆ ಕೇಂದ್ರ ಸರ್ಕಾರ

ಪೆಟ್ರೋಲ್, ಡೀಸೆಲ್ ಮೇಲಿನ ಕೇಂದ್ರ ಅಬಕಾರಿ ಸುಂಕ ೧೦ ರೂಪಾಯಿ ಕಡಿತ ಮಾಡಿರುವುದನ್ನು ಅವರು ಸ್ವಾಗತಿಸಿದ್ದಾರೆ.

<><><>

ಐಪಿಎಲ್-೨೦೨೮ರ ಉದ್ಘಾಟನಾ ಪಂದ್ಯ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿದೆ. ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಉದ್ಘಾಟನಾ ಪಂದ್ಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಇಂದು ಆಹ್ವಾನ ನೀಡಿದ್ದಾರೆ. ಈ ವೇಳೆ ಮುಖ್ಯಮಂತ್ರಿ ಶಾಸಕರಿಗೂ ಟಿಕೆಟ್ ನೀಡುವಂತೆ ಕೆ.ಎಸ್.ಸಿ.ಎ.ಗೆ ಸಲಹೆ ನೀಡಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಬೆಂಗಳೂರಿನಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ. ಸಾರ್ವಜನಿಕರು ಮೆಟ್ರೋ ಮತ್ತು ಬಿಎಂಟಿಸಿ ಸಾರಿಗೆ ವ್ಯವಸ್ಥೆಯನ್ನು ಬಳಸುವಂತೆ ಪೊಲೀಸರು ಮನವಿ ಮಾಡಿದ್ದಾರೆ. ಪ್ರವೇಶ ಹಾಗೂ ನಿರ್ಗಮನ ದ್ವಾರಗಳ ಸಂಖ್ಯೆಯನ್ನು ದ್ವಿಗುಣಗೊಳಿಸಲಾಗಿದ್ದು, ಈ ಬಾರಿ ೨೨ರಿಂದ ೪೫ ದ್ವಾರಗಳನ್ನು ತೆರೆಯಲಾಗಿದೆ. ಪ್ರೇಕ್ಷಕರು ಟಿಕೆಟ್‌ನಲ್ಲಿ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ. ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತಮುತ್ತ ನೋ ಪಾರ್ಕಿಂಗ್ ಇರಲಿದ್ದು, ಬೇರೆಡೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ.

<><><>

ಗುಂಡ್ಲುಪೇಟೆ ತಾಲೂಕಿನ ಚೆನ್ನಮಲ್ಲಿಪುರ ಗ್ರಾಮದಲ್ಲಿ ರೈತರ ಜಮೀನುಗಳಲ್ಲಿ ಬೀಡುಬಿಟ್ಟಿದ್ದ  ಹುಲಿಯನ್ನು ಅರಣ್ಯ ಇಲಾಖೆ ಯಶಸ್ವಿ ಕಾರ್ಯಾಚರಣೆ ನಡೆಸಿ ಸೆರೆ ಹಿಡಿದಿದೆ. ಸೆರೆ ಸಿಕ್ಕ ಹುಲಿಯು ಅಂದಾಜು ೧೦ ರಿಂದ ೧೨ ವರ್ಷ ವಯೋಮಾನದ ಹೆಣ್ಣು ಹುಲಿಯಾಗಿದೆ. ಡ್ರೋಣ್ ಹಾಗೂ ಭೀಮ ಮತ್ತು ಮಹೇಂದ್ರ  ಎಂಬ ಸಾಕಾನೆಗಳನ್ನು ಬಳಸಿಕೊಂಡು  ಕಾರ್ಯಾಚರಣೆ ನಡೆಸಿ  ಅರವಳಿಕೆ ಚುಚ್ಚುಮದ್ದು ನೀಡಿ ಹುಲಿಯನ್ನು ಸೆರೆ ಹಿಡಿಯಲಾಗಿದೆ. ಸೆರೆ ಹಿಡಿದ ಹುಲಿಯನ್ನು ಮೈಸೂರಿನ ಪುನರ್ವಸತಿ ಕೇಂದ್ರಕ್ಕೆ ರವಾನೆ ಮಾಡಲಾಗಿದೆ ಎಂದು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕ ಪ್ರಭಾಕರನ್ ತಿಳಿಸಿದ್ದಾರೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ  ೧೦೦ಕ್ಕೂ ಅಧಿಕ ಸಿಬ್ಬಂದಿ, ಪೊಲೀಸ್ ಇಲಾಖೆ  ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದರು.

<><><>

ರಾಜ್ಯದೆಲ್ಲೆಡೆ ಇಂದು ಶ್ರೀರಾಮನವಮಿಯನ್ನು ಆಚರಿಸಲಾಗುತ್ತಿದೆ. ದಾವಣಗೆರೆ ನಗರ ಸೇರಿ ಜಿಲ್ಲೆಯಾದ್ಯಂತ ಶ್ರೀರಾಮನವಮಿಯನ್ನು ಸಂಭ್ರಮದಿಂದ ಆಚರಿಸಲಾಯಿತು. ನಗರದ ಹಲವು ಬಡಾವಣೆಗಳ ಶ್ರೀರಾಮನ ದೇವಾಲಯಗಳು ಸೇರಿದಂತೆ ವಿವಿಧ ದೇವಾಲಯಗಳ ಬಳಿ ಭಕ್ತರಿಗೆ ಪಾನಕ, ಕೋಸಂಬರಿ ವಿತರಿಸಲಾಯಿತು. ಶ್ರೀರಾಮನವಮಿಯನ್ನು ಇಂದು ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಅತ್ಯಂತ ಶ್ರದ್ಧಾಭಕ್ತಿಗಳಿಂದ ಆಚರಿಸಲಾಗುತ್ತಿದ್ದು, ಶ್ರೀರಾಮ, ಹನುಮ ದೇವಾಲಯಗಳಲ್ಲಿ ವಿಶೇಷಪೂಜೆ, ಅಲಂಕಾರ, ತೀರ್ಥ ಪ್ರಸಾದ ವಿನಿಯೋಗ ನಡೆಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ ಹಾಗೂ ನೆಲಮಂಗಲ ತಾಲೂಕುಗಳಲ್ಲಿ ರಾಮನವಮಿಯನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಕೋಲಾರ ಜಿಲ್ಲೆಯಾದ್ಯಂತ ಶ್ರೀರಾಮನವಮಿಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ಶ್ರೀರಾಮನ ದೇಗುಲಗಳು ಹಾಗೂ ಆಂಜನೇಯಸ್ವಾಮಿ ದೇವಾಲಯಗಳಲ್ಲಿ ನಿನ್ನೆಯಿಂದಲೇ ವಿಶೇಷ ಪೂಜಾ ಕೈಂಕರ್ಯ ಜರುಗುತ್ತಿವೆ.

ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಭಕ್ತರು ಶ್ರದ್ಧಾ ಭಕ್ತಿಯಿಂದ ಶ್ರೀರಾಮ ಜಯಂತಿಯನ್ನು ಆಚರಿಸುತ್ತಿದ್ದು, ರಾಮ, ಆಂಜನೇಯ ದೇವಾಲಯಗಳಿಗೆ ಭೇಟಿ ನೀಡುತ್ತಿದ್ದಾರೆ. ಶ್ರೀರಾಮ ನವಮಿ ಉತ್ಸವ ಗದಗ ಜಿಲ್ಯಾದ್ಯಂತ ಶ್ರದ್ಧಾ ಭಕ್ತಿಯಿಂದ ಜರುಗಿತು. ಗದಗ ಬೇಟಗೇರಿಯ ಕುಷ್ಟಗಿ ಚಾಳದಲ್ಲಿರುವ ರಾಮದೇವಸ್ಥಾನ, ಬೇಟಗೇರಿಯ ಶ್ರೀ ರಾಮ ಮಂದಿರದಲ್ಲಿ ರಾಮದೇವರ ಮೂರ್ತಿಗೆ ವಿಶೇಷ ಪೂಜೆ ಜರುಗಿತು.

<><><>

೨೦೨೬-೨೭ ರ ರಾಷ್ಟ್ರೀಯ ಜನಗಣತಿ ನಡೆಸಲು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಈ ವರ್ಷದ ಏಪ್ರಿಲ್ ಒಂದರಿಂದ ಜಿಲ್ಲೆಯಲ್ಲಿ ಜನಗಣತಿ ಪ್ರಕ್ರಿಯೆ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ಮಾಹಿತಿ ನೀಡಿದ್ದಾರೆ. ರಾಷ್ಟ್ರೀಯ ಜನಗಣತಿ ಏಪ್ರಿಲ್ ೧ರಿಂದ ಆರಂಭವಾಗಲಿದ್ದು, ಒಟ್ಟು ಎರಡು ಹಂತಗಳಲ್ಲಿ ನಡೆಯಲಿದೆ. ಮೊದಲ ಹಂತದಲ್ಲಿ ಮನೆಗಳ ಪಟ್ಟಿ ಕಾರ್ಯಾಚರಣೆ ನಡೆಯಲಿದೆ. ೨೦೨೭ ರ ಫೆಬ್ರವರಿಯಲ್ಲಿ ಆರಂಭವಾಗಲಿರುವ ಎರಡನೇ ಹಂತದಲ್ಲಿ ಪ್ರತಿ ವ್ಯಕ್ತಿಯನ್ನೂ ಒಳಗೊಂಡ ನಿಖರವಾದ ಜನಸಂಖ್ಯೆಯ ಗಣತಿ ನಡೆಯಲಿದೆ. ಮೊದಲ ಹಂತ ಏಪ್ರಿಲ್ ೧ ರಿಂದ ಮೇ ೧೫ ರವರೆಗೆ ಒಟ್ಟು ೪೫ ದಿನಗಳ ಕಾಲ ನಡೆಯಲಿದೆ ಎಂದು ತಿಳಿಸಿದ್ದಾರೆ. ಗಣತಿದಾರರು ಮನೆಯ ಬಳಿ ಬಂದಾಗ ಅವರು ಕೇಳುವ ೩೪ ಪ್ರಶ್ನೆಗಳಿಗೆ ಸಾರ್ವಜನಿಕರು ಸರಿಯಾದ ಮತ್ತು ನಿಖರವಾದ ಮಾಹಿತಿ ನೀಡಬೇಕು ಎಂದು ಹೇಳಿದ್ದಾರೆ. ಇದೇ ಮೊದಲ ಬಾರಿಗೆ ದೇಶದಲ್ಲಿ ರಾಷ್ಟ್ರೀಯ ಜನಗಣತಿ ಮೊಬೈಲ್ ಆಪ್ ಮೂಲಕ ಡಿಜಿಟಲ್ ಜನಗಣತಿ ಸ್ವರೂಪ ಪಡೆದುಕೊಂಡಿರುವುದು ವಿಶೇಷವಾಗಿದೆ.

<><><>

ಆಗುಂಬೆ ಘಾಟಿಯ ನಾಲ್ಕನೇ ಸುತ್ತಿನಲ್ಲಿ ಮರವೊಂದು ರಸ್ತೆಗೆ ಅಡ್ಡ ಬಿದ್ದ ಪರಿಣಾಮ ವಾಹನ ಸಂಚಾರ ಬಂದ್ ಆಗಿದೆ. ಇದರಿಂದ ತೀರ್ಥಹಳ್ಳಿ - ಉಡುಪಿ ಮಾರ್ಗವಾಗಿ ಹೋಗುತ್ತಿದ್ದ ವಾಹನಗಳು ಘಾಟಿಯ ಎರಡು ಕಡೆ ಸಿಲುಕಿಕೊಂಡಿವೆ. ಘಾಟಿಯಲ್ಲಿ ತೆರಳುತ್ತಿದ್ದ ಲಾರಿ ಚಾಲಕರು ಮರ ತೆರವಿಗೆ ಪ್ರಯತ್ನ ಪಡುತ್ತಿದ್ದಾರೆ.

<><><>

ಇಂದು ವಿಶ್ವ ರಂಗಭೂಮಿ ದಿನಾಚರಣೆ. ರಂಗಭೂಮಿ ಚಟುವಟಿಕೆ ನಿರತರಿಗೂ ಒಂದು ಸ್ಮರಣೀಯ ದಿನ ಬೇಕು ಎನ್ನುವ ಕಾರಣದಿಂದಾಗಿ ೧೯೬೨ರಿಂದ ವಿಶ್ವ ರಂಗಭೂಮಿ ದಿನವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಶಾಂತಿಯ ಸಂಸ್ಕೃತಿಗಾಗಿ ರಂಗಭೂಮಿ ಅನ್ನುವ ಘೋಷವಾಕ್ಯದೊಂದಿಗೆ ಜಗತ್ತಿನ ಎಲ್ಲ ರಂಗಜೀವಿಗಳು ಒಟ್ಟಾಗುವ ಹಬ್ಬ ಇದಾಗಿದೆ. ವಿವಿಧ ರಂಗ ಸಂಸ್ಥೆಗಳು ವಿಶೇಷ ರಂಗಪ್ರಯೋಗಗಳೊಂದಿಗೆ ಈ ವಿಶೇಷ ದಿನವನ್ನು ಸಂಭ್ರಮದಿಂದ ಆಚರಿಸುತ್ತಿವೆ. ಈ ಬಾರಿ ಅಮೆರಿಕದ ರಂಗಕರ್ಮಿ ಹಾಗೂ ನಟ ವಿಲ ಯೆಂ ಡೆಫೊ ವಿಶ್ವ ರಂಗಭೂಮಿ ದಿನಾಚರಣೆಯ ಸಂದೇಶ ನೀಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆ ರಂಗಭೂಮಿ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ದೊಡ್ಡಬಳ್ಳಾಪುರದಲ್ಲಿ ಕಲಾವಿದರ ಸಂಘದ ವತಿಯಿಂದ ನಡೆದ ವಿಶ್ವ ರಂಗಭೂಮಿ ದಿನಾಚರಣೆ ಕಾರ್ಯಕ್ರಮದಲ್ಲಿ ಹಿರಿಯ ರಂಗ ಕಲಾವಿದ ಕೆಂಪಣ್ಣ ಮಾತನಾಡಿ, ಸಮಾಜದ ಪರಿವರ್ತನೆಯಲ್ಲಿ ರಂಗಭೂಮಿ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು. ನವರಸಗಳ ನೇರವಾದ ಅನುಭವ ನೀಡುವ ರಂಗಭೂಮಿ ಸಮಾಜಕ್ಕೆ ತಿಳಿಹೇಳಿ ತಿದ್ದುವ ಪ್ರಬಲ ಶಕ್ತಿ ಹೊಂದಿದೆ ಎಂದು ರಂಗಕರ್ಮಿ, ನಿವೃತ್ತ ಆಯುಕ್ತ ರವಿ ಕೋಟಾರಗಸ್ತಿ ಹೇಳಿದ್ದಾರೆ. ಬೆಳಗಾವಿಯಲ್ಲಿ ವಿಶ್ವ ರಂಗಭೂಮಿ ದಿನಾಚರಣೆ ನಿಮಿತ್ತ ಆಯೋಜಿಸಲಾದ

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಾಚೀನ ಕಾಲದಿಂದ ರಂಗಭೂಮಿ ಆರೋಗ್ಯಕರ ಸಮಾಜಕ್ಕೆ ತನ್ನ ಸೃಜನಶೀಲ ಕೊಡುಗೆ ನೀಡುತ್ತ ಬಂದಿದೆ ಎಂದು ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>